# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲ್ಲೂಕಿನ ಪಿ.ಬಿ.ಮಂಚನಹಳ್ಳಿ ಗ್ರಾಮದಿಂದ ಚಟ್ಟಂಗೆರೆ – ತೆಂಡೆಕೆರೆ ಮುಖ್ಯ ರಸ್ತೆ ಅಭಿವೃದ್ಧಿ (ಡಾಂಬರೀಕರಣ) ಕಾಮಗಾರಿಯಲ್ಲಿ ಸರ್ಕಾರಿ ಹಣದ ದುರುಪಯೋಗಕ್ಕೆ ಕಾರಣರಾಗಿರುವ ಶ್ರೀ ಹೆಚ್.ಶಿವಣ್ಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಮತ್ತು ಶ್ರೀ ಶ್ರೀಕಂಠಯ್ಯ, ಕಿರಿಯ ಇಂಜಿನಿಯರ್ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ – ಆದೇಶ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ಸಂಖ್ಯೆ: ಉಕಾ1 / ಸಿ8 / ಇಂ / ವಿವ / 29 / 09–10, ದಿನಾಂಕ: 30.09.2013.
2. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 2 ಇಎನ್‌ಕ್ಯೂ 2014, ದಿನಾಂಕ : 20.01.2014
3. ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 02 ಇಎನ್‌ಕ್ಯೂ 2014, ದಿನಾಂಕ: 21.01.2014.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ಸಂಖ್ಯೆ: ಉಕಾ1 / ಸಿ5 / ಸಿಸಿಎ / ಸಿಆರ್ 60 / 11–12, ದಿನಾಂಕ: 03.09.2015.

******

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ದಿನಾಂಕ : 30.09.2013ರ ಪತ್ರದಲ್ಲಿ ಶ್ರೀ ಹೆಚ್.ಶಿವಣ್ಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಮತ್ತು ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್ ಇವರುಗಳು ಈ ಹಿಂದೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೆ.ಆರ್.ಪೇಟೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಕೆ.ಆರ್.ಪೇಟೆ ತಾಲ್ಲೂಕಿನ ಪಿ.ಬಿ.ಮಂಚನಹಳ್ಳಿ ಗ್ರಾಮದಿಂದ ಚಟ್ಟಂಗೆರೆ – ತೆಂಡೆಕೆರೆ ಮುಖ್ಯ ರಸ್ತೆ ಅಭಿವೃದ್ಧಿ (ಡಾಂಬರೀಕರಣ) ಕಾಮಗಾರಿ (ಸರಪಳಿ 0.00 ರಿಂದ 0.400 ಕಿ.ಮೀ. ರವರೆಗೆ) 2009–10ನೇ ಸಾಲಿನ ಲೆಕ್ಕಶೀರ್ಷಿಕೆ 5054ರಡಿ ಡಿ.ಆರ್.ಸಂಖ್ಯೆ : 1856/2009–10ರಲ್ಲಿ ಅಂದಾಜು ಮೊತ್ತ ರೂ. 5.00 ಲಕ್ಷಗಳಿಗೆ ಮಂಜೂರಾಗಿರುವ ಕಾಮಗಾರಿಯನ್ನು ನಿರ್ವಹಿಸದೆ ಕರ್ತವ್ಯಲೋಪವೆಸಗಿ ಸರ್ಕಾರಕ್ಕೆ ಆರ್ಥಿಕ ನಷ್ಟವುಂಟು ಮಾಡಿರುವ ಕುರಿತು ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೆ.ಆರ್.ಪೇಟೆ ಮತ್ತು ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ ರವರು ಸ್ಥಳ ಪರಿಶೀಲಿನೆ ಮಾಡಿ ಸಲ್ಲಿಸಿರುವ ತನಿಖಾ ವರದಿಯಿಂದ ಕಂಡು ಬಂದಿರುವ ಪ್ರಯುಕ್ತ ಒಬ್ಬ ಜವಾಬ್ದಾರಿಯುತ ಅಧಿಕಾರಿಗಳಾಗಿ

– 2

ನಿಯಮಗಳನ್ನು ಉಲ್ಲಂಘಿಸಿ ಕರ್ತವ್ಯಲೋಪವೆಸಗಿರುವ ಇವರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ನಿರ್ಧರಿಸಿ, ಸದರಿಯವರುಗಳ ಪೈಕಿ ಶ್ರೀ ಹೆಚ್.ಶಿವಣ್ಣ ರವರು ಸೇವೆಯಿಂದ ದಿನಾಂಕ : 30.06.2012ರಂದು ವಯೋನಿವೃತ್ತಿ ಹೊಂದಿರುವುದರಿಂದ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳು ನಿಯಮ 214ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ಹೆಚ್.ಶಿವಣ್ಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ)ರವರ ವಿರುದ್ಧದ ಆರೋಪದ ಕುರಿತು ಇಲಾಖಾ ವಿಚಾರಣೆ ನಡೆಸಬೇಕೆಂದು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ: 20.01.2014ರಲ್ಲಿ ಆದೇಶಿಸಲಾಗಿದೆ. ಈ ಪ್ರಕರಣದಲ್ಲಿ ಭಾಗಿಯಾದ ಅಪಾದಿತ ಅಧಿಕಾರಿ / ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವಗೀಕರಣ, ನಿಯಂತ್ರ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-11ರಂತೆ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ : 21.01.2014ರ ಜ್ಞಾಪನ ಪತ್ರ / ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಅಪಾದಿತ ಅಧಿಕಾರಿ / ನೌಕರರು ದಿನಾಂಕ: 28.02.2014ರಂದು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಅವರ ವಿರುದ್ಧ ಮಾಡಲಾದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆದ್ದರಿಂದ, ಆಪಾದಿತರುಗಳ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯುವ ಸಲುವಾಗಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಮುಂದಿನಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ ಗ್ರಾಅಪ 2 ಇಎನ್‌ಕ್ಯೂ 2014</u>**

**<u>ಬೆಂಗಳೂರು, ದಿನಾಂಕ: 19.09.2015</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-13ರನ್ವಯ ಶ್ರೀ ಹೆಚ್.ಶಿವಣ್ಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಮತ್ತು ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಬೆಂಗಳೂರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತದ ತಾಂತ್ರಿಕ ಸಹಾಯಕರನ್ನು ಮಂಡನಾಧಿಕಾರಿಯನ್ನಗಿ ನೇಮಿಸಲಾಗಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-11ರಲ್ಲಿ

ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಜರುಗಿಸಿ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲುಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

2/9/09

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ / ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣ ಅಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
4. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣ ಅಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದ), ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಕೆ.ಆರ್.ವೃತ್ತ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.
7. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, #1242, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40 (ದೂರವಾಣಿ ಸಂಖ್ಯೆ : 23394245).
8. ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
9. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ
10. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೆ.ಆರ್.ಪೇಟೆ.
11. ಸಂಬಂಧಿಸಿದ ಅಧಿಕಾರಿ / ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಮುಖಾಂತರ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).
13. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.

- 4

14. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
15. ಮೇಲ್ವಿಚಾರಕರು, ಗಣಕಕೇಂದ್ರ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸಲು ಕಳುಹಿಸಿದೆ.
16. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.